# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 638 (679) |
| ಸದಸ್ಯರ ಹೆಸರು | ಡಾ॥ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 14.12.2020 |
| ಉತ್ತರಿಸಬೇಕಾದ ಸಚಿವರು | ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ) |

| | ಪ್ರಶ್ನೆ | ಉತ್ತರ |
|---|---|---|
| (ಅ) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; | ಕೋಲಾರ ಜಿಲ್ಲೆ – 10<br>ಚಿಕ್ಕಬಳ್ಳಾಪುರ ಜಿಲ್ಲೆ – 09 |
| (ಆ) | ಎಲ್ಲಾ ಪ್ರಥಮ ದರ್ಜೆ ಕಾಲೇಜುಗಳಿಗೆ ಸ್ವಂತ ಕಟ್ಟಡಗಳಿವೆಯೇ; | ರಾಜ್ಯದಲ್ಲಿ ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ 430 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿರುತ್ತವೆ. ಈ ಪೈಕಿ 374 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸ್ವಂತ ಕಟ್ಟಡಗಳಿರುತ್ತವೆ. |
| ಇ) | ಇಲ್ಲದಿದ್ದರೆ, ಎಷ್ಟು ಕಾಲೇಜುಗಳಿಗೆ ಸ್ವಂತ ಕಟ್ಟಡಗಳಿಲ್ಲ ಯಾವ ಯಾವ ಕಾರಣದಿಂದ ಕಾಲೇಜುಗಳ ಸ್ವಂತ ಕಟ್ಟಡಗಳನ್ನು ಹೊಂದಿರುವುದಿಲ್ಲ, | 56 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸ್ವಂತ ಕಟ್ಟಡವಿರುವುದಿಲ್ಲ.<br>• ಈ ಪೈಕಿ 34 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ನಿವೇಶನವಿರುವುದಿಲ್ಲ.<br>• ಈ ಪೈಕಿ 12 ಕಾಲೇಜುಗಳ ಕಟ್ಟಡ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.<br>• ಉಳಿದ 10 ಕಾಲೇಜುಗಳಿಗೆ ನಿವೇಶನ ದೊರೆತಿದ್ದು, ಈಗಾಗಲೇ 6 ಕಾಲೇಜುಗಳಿಗೆ ಕಟ್ಟಡ ಹೊಂದಲು ಅನುದಾನ ಒದಗಿಸಲಾಗಿದೆ. 04 ಕಾಲೇಜುಗಳಿಗೆ ಕಟ್ಟಡ ನಿರ್ಮಾಣಕ್ಕಾಗಿ ನಿಯಮಾನುಸಾರ ಅನುದಾನದ ಲಭ್ಯತೆಯನುಸಾರ ಅಗತ್ಯ ಕ್ರಮಕೈಗೊಳ್ಳಲಾಗುವುದು. |
| ಈ) | ಸ್ವಂತ ಕಟ್ಟಡಗಳನ್ನು ಕಲ್ಪಿಸಲು ಅಗತ್ಯವಿರುವ ಅನುದಾನವೆಷ್ಟು; | ನಿವೇಶನ ದೊರೆತಿರುವಂತಹ ಕಾಲೇಜುಗಳಿಗೆ ವಿದ್ಯಾರ್ಥಿ ಸಂಖ್ಯೆ ಹಾಗೂ ಕೋರ್ಸುಗಳಿಗನುಗುಣವಾಗಿ ಅನುದಾನ ಲಭ್ಯತೆಯನುಸಾರ ಅಗತ್ಯ ಪ್ರಮಾಣ ಕಟ್ಟಡವನ್ನು ನಿರ್ಮಿಸಲು ಅಂದಾಜಿಸಿ, ಆ ಅಂದಾಜು ಮೊತ್ತದ ಅನುಸಾರ ಅನುದಾನ ಒದಗಿಸಿಕೊಂಡು ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು. |
| ಉ) | ಎಷ್ಟು ವರ್ಷಗಳೊಳಗೆ ಕಟ್ಟಡಗಳನ್ನು ಒದಗಿಸಲಾಗುವುದು? (ಜಿಲ್ಲಾವಾರು ವಿವರ ನೀಡುವುದು) | ನಿವೇಶನ ದೊರೆತ ನಂತರ, ಅನುದಾನದ ಲಭ್ಯತೆ ಹಾಗೂ ಸರ್ಕಾರದಿಂದ ಅನುದಾನ ಪಡೆದು ಆಡಳಿತಾತ್ಮಕ ಅನುಮೋದನೆ ನೀಡಿ ನಿರ್ಮಾಣ ಸಂಸ್ಥೆಯ ಮೂಲಕ ಒಂದು ನಿಗಧಿತ ಅವಧಿಯೊಳಗೆ ಕಟ್ಟಡ ಒದಗಿಸಲು ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು. |

**ಇಡಿ 231 ಡಿಸಿಇ 2020**

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)